### ತುಬಚಿ-ಬಬಲೇಶ್ವರ ಏತ ನೀರಾವರಿ ಯೋಜನೆ । ಜಮೀನು ಕಳೆದುಕೊಂಡ ರೈತರಿಗಿಲ್ಲ ಪರಿಹಾರ

# ಸಂತ್ರಸ್ತ ರೈತರಿಗೆ ಪರಿಹಾರ ನೀಡಲು ರೈತ ಸಂಘ ಆಗ್ರಹ

**ಉದಯರಶ್ಮಿ ನ್ಯೂಸ್**

ವಿಜಯಪುರ: ಜಿಲ್ಲೆಯ ತಿಕೋಟಾ ತಾಲೂಕಿನಲ್ಲಿ ನಡೆದ ತುಬಚಿ-ಬಬಲೇಶ್ವರ ಏತ ನೀರಾವರಿಯು 2019-2020 ನೇ ಸಾಲಿನಲ್ಲಿ ಕಾಮಗಾರಿ ಮುಗಿದು ಸುಮಾರು 3-4 ವರ್ಷಗಳೇ ಕಳೆದರು ಇಲ್ಲಿಯವರೆಗೆ ರೈತರಿಗೆ ಬರಬೇಕಾದ ಪರಿಹಾರ ಇನ್ನು ಬಂದಿಲ್ಲವೆಂದು ಜಿಲ್ಲಾಧಿಕಾರಿಗಳಿಗೆ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ವತಿಯಿಂದ ಕೂಡಲೇ ಪರಿಹಾರ ಬಿಡುಗಡೆ ಮಾಡಬೇಕೆಂದು ಆಗ್ರಹಿಸಿ ಮನವಿ ಸಲ್ಲಿಸಲಾಯಿತು.




ಹೊನವಾಡ ಒಂದೇ ಗ್ರಾಮದಲ್ಲಿ ಸುಮಾರು 1000 ಕ್ಕೂ ಅಧಿಕ ಜಮೀನು ಕಳೆದುಕೊಂಡ ರೈತರಿಗೆ ಪರಿಹಾರ ಬಂದಿರುವುದಿಲ್ಲ, ಅಧಿಕಾರಿಗಳಿಗೆ ಕೇಳಿದರೆ ಇದು ನಮ್ಮ ವ್ಯಾಪ್ತಿಗೆ ಬರುವುದಿಲ್ಲ, ಅಲ್ಲಿ ಹೋಗಿ, ಇಲ್ಲಿ ಹೋಗಿ ಎಂದು ಹಾರಿಕೆ ಉತ್ತರ ನೀಡುತ್ತಿದ್ದಾರೆ, ಗುತ್ತಿಗೆ ಹಿಡಿದವರು ತಮ್ಮ ಕೆಲಸ ಮುಗಿಸುವ ವೇಳೆ ರೈತರೊಂದಿಗೆ ಚೆನ್ನಾಗಿ ಮಾತನಾಡಿ ಈಗ ಕೆಲಸ ಮುಗಿಸಿಕೊಂಡು ಹೋಗಿದ್ದಾರೆ, ಅವರಿಗೆ ಕೇಳಿದರೆ ಅಧಿಕಾರಿಗಳಿಗೆ ಕೇಳಿ ಎಂದು ತಪ್ಪಿಸಿಕೊಳ್ಳುತ್ತಿದ್ದಾರೆ.

ಆದ್ದರಿಂದ ಕೂಡಲೇ ಸಂಬಂಧಿಸಿದ ಅಧಿಕಾರಿಗಳನ್ನು ಕರೆದು ಇಲ್ಲಿಯವರೆಗೆ ಕೇವಲ ಭೂ ಸ್ವಾಧೀನದ 4(1) ಪೋರಂ ನೀಡಿ, ಮುಂದಿನ ಯಾವುದೇ ಕ್ರಮ ಕೈಗೊಂಡಿಲ್ಲ, ಅವರನ್ನು ಮುಂದಿನ ಕ್ರಮಕ್ಕೆ ಮಾರ್ಗದರ್ಶನ ನೀಡಿ ಎಂದು ಜಿಲ್ಲಾಧಿಕಾರಿಗಳ ಪರವಾಗಿ ತಹಶಿಲ್ದಾರ ಎಂ.ಕೆ.ದೇಸಾಯಿ ಅವರಿಗೆ ಮನವಿ ಸಲ್ಲಿಸಿ ಮಾತನಾಡಿದರು.

ಈ ವೇಳೆ ರಾಜ್ಯ ಪ್ರಧಾನ ಕಾರ್ಯದರ್ಶಿ ರಾಹುಲ ಕುಬಕಡ್ಡಿ, ಜಿಲ್ಲಾಧ್ಯಕ್ಷ ಸಂಗಮೇಶ ಸಗರ, ಜಿಲ್ಲಾ ಗೌರವಾಧ್ಯಕ್ಷ ಕಲ್ಲಪ್ಪ ಪಾರಶೆಟ್ಟಿ, ಜಿಲ್ಲಾ ಸಂಚಾಲಕ ರಾಮನಗೌಡ ಪಾಟೀಲ, ಸಂಚಾಲಕ ಪ್ರತಾಪ ನಾಗರಗೋಜಿ, ಜಿಲ್ಲಾ ಸಂಚಾಲಕ ನಜೀರ ನಂದರಗಿ, ತಿಕೋಟಾ ಸಂಚಾಲಕ ಶಾನುರ ನಂದರಗಿ, ಅಭಿಷೇಕ ಹೂಗಾರ, ಶಶಿಕಾಂತ ಬಿರಾದಾರ, ಖಾದರಸಾಬ ವಾಲಿಕಾರ, ಗುರುಲಿಂಗ ಕಾಳಿ, ಇಲಾಯೀ ವಾಲಿಕಾರ, ಆಕಾಶ ಜಾನವರ, ರಾಮು ಗೌರಗುಂಡ, ರಾಜಕುವಾರ ಹಿರೇಕುರಬರ, ಸುದಾಕರ ನಲವಡೆ, ರಿಯಾಜ್ ವಾಲಿಕಾರ, ಸೇರಿದಂತೆ ಅನೇಕರು ಇದ್ದರು.

# ಬೆನಕೋಪ್ಪರಿಂದ ಶೈಕ್ಷಣಿಕ ಗುಣಮಟ್ಟ ಪರಿಶೀಲನೆ



ಆಲಮಟ್ಟಿ: ಎಸ್.ವ್ಹಿ.ವ್ಹಿ. ಶಿಕ್ಷಣ ಸಂಸ್ಥೆಯ ಅಂಗಳದ ವಿವಿಧ ಶಾಲಾ ಕಾಲೇಜು ತತ್ವ ವರ್ಗಕೋಣೆಯಲ್ಲಿ ಶುಭ ಮಂಗಳವಾರದಂದು ಅಭೂತಪೂರ್ವವಾಗಿ ಕಂಡು ಬಂತು.

ಗದುಗಿನ ಜಗದ್ಗುರು ತೋಂಟದಾರ್ಯ ವಿದ್ಯಾಪೀಠದ ಹಾಗೂ ಆಲಮಟ್ಟಿ ಶ್ರೀಮದ್ ವೀರಶೈವ ವಿದ್ಯಾಲಯ ಅಸೋಸಿಯೇಷನ್ ಶಿಕ್ಷಣ ಸಂಸ್ಥೆಗಳ ಸಿಇಓ, ನಿವೃತ್ತ ಡಿಡಿಪಿಐ ಆಯ್.ಬಿ.ಬೆನಕೋಪ್ಪ ಅವರು ಇಂದು ಇಲ್ಲಿನ ಶಾಲಾ ಕಾಲೇಜುಗಳಿಗೆ ಭೇಟಿ ನೀಡಿ ಮಕ್ಕಳ ಶೈಕ್ಷಣಿಕ ಗುಣಮಟ್ಟ ಪರಿಶೀಲಿಸಿ ಮುಂಬರಲಿರುವ ಎಸ್.ಎಸ್.ಎಲ್.ಸಿ.ಹಾಗೂ ಪಿಯುಸಿ ಪರೀಕ್ಷಾ ಹಿನ್ನೆಲೆಯಲ್ಲಿ ವಿಶೇಷ ಟಿಪ್ಸ್ ಗಳನ್ನು ಮಕ್ಕಳೊಂದಿಗೆ ಹಂಚಿಕೊಂಡು ಆತ್ಮಸಾಕ್ಷಿಯ ಮನೋಬಲವನ್ನು ಹೆಚ್ಚಿಸುವಲ್ಲಿ ಮಹತ್ವರದ ಹೆಜ್ಜೆಗಳನ್ನು ಇರಿಸಿದ್ದು ಅವಿಸ್ಮರಣೀಯವಾಗಿತ್ತು.

ಮಹನೀಯರೊಂದಿಗೆ ಸಂಸ್ಥೆಯ ಮುಖ್ಯಸ್ಥರು, ಎಲ್ಲ ಸಿಬ್ಬಂದಿಗಳು, ಶಿಕ್ಷಕರು, ಉಪನ್ಯಾಸ ಬಳಗದವರಿದ್ದರು .

### ಸಿಂದಗಿ-ಶಹಾಪೂರ ಮುಖ್ಯ ರಸ್ತೆ ಸಂಚಾರಕ್ಕೆ ತಡೆ । ಸಮರ್ಪಕ ವ್ಯವಸ್ಥೆ ಕಲ್ಪಿಸಲು ಆಗ್ರಹ

# ವಿದ್ಯಾರ್ಥಿಗಳಿಂದ ರಸ್ತೆ ತಡೆ ; ಸಂಚಾರ ಅಸ್ತವ್ಯಸ್ತ




**ಉದಯರಶ್ಮಿ ನ್ಯೂಸ್**

ಬ್ರಹ್ಮದೇವನಮಡು: ಗ್ರಾಮೀಣ ಭಾಗದಲ್ಲಿ ಸಾರಿಗೆ ಸಂಸ್ಥೆ ಬಸ್ ಗಳ ವ್ಯವಸ್ಥೆ ಕಲ್ಪಿಸುವ ಜತೆಗೆ ಎಲ್ಲ ಬಸ್ ಗಳ ನಿಲುಗಡೆಗೆ ಆಗ್ರಹಿಸಿ ಸಿಂದಗಿ ತಾಲೂಕು ಸಾಸಾಬಾಳ ಕ್ರಾಸ್ ಬಳಿ ವಿದ್ಯಾರ್ಥಿಗಳು ಹಾಗೂ ಪಾಲಕರು ಮಂಗಳವಾರ ಬೆಳಗ್ಗೆ ಮೂರು ಗಂಟೆ ಕಾಲ ಸಿಂದಗಿ - ಶಹಾಪೂರ ಮುಖ್ಯ ರಸ್ತೆ ಸಂಚಾರ ತಡೆದು ಪ್ರತಿಭಟನೆ ನಡೆಸಿದರು.

ಈ ವೇಳೆ ಯುವ ಮುಖಂಡ ಮಲ್ಲನಗೌಡ ಬಿರಾದಾರ, ಶಿವು ಕುದರಿ ಮಾತನಾಡಿ,ಶಾಲೆ- ಕಾಲೇಜಿಗೆ ಸಿಂದಗಿಗೆ ತೆರಳಲು ಬಸ್ ಇಲ್ಲದೆ ಪರದಾಡುವಂತಾಗಿದೆ.ಈ ಬಗ್ಗೆ ಸಾರಿಗೆ ಅಧಿಕಾರಿಗಳಿಗೆ ಹಲವು ಭಾರಿ ಪ್ರತಿಭಟಿಸಿ ಮನವಿ ಸಲ್ಲಿಸಿದರೂ ಪ್ರಯೋಜನವಾಗಿಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು.ಈ ಭಾಗದಲ್ಲಿ ಸಂಚರಿಸುವ ಬಸ್ ಗಳ ಸಂಖ್ಯೆ ಹೆಚ್ಚಿಸಬೇಕು ಎಂದು ಆಗ್ರಹಿಸಿದರು.

ಸ್ಥಳಕ್ಕೆ ಭೇಟಿ ನೀಡಿದ ಘಟಕದ ವ್ಯವಸ್ಥಾಪಕ ರೇವಣಸಿದ್ದ ಖೈನೂರ ಮಾತನಾಡಿ, ಶಾಲೆ - ಕಾಲೇಜು ಅವಧಿಯಲ್ಲಿ ಬಸ್ ಸೌಲಭ್ಯ ಕಲ್ಪಿಸುವ ಭರವಸೆ ನೀಡಿದರು. ಅಲ್ಲದೇ ವೇಗದೂತ ಬಸ್ ಗಳ ನಿಲುಗಡೆಗೂ ಕ್ರಮ ವಹಿಸಲಾಗುವುದು. ವಿದ್ಯಾರ್ಥಿಗಳಿಗೆ ಯಾವುದೇ ಸಮಸ್ಯೆ ಆಗದಂತೆ ನೋಡಿಕೊಳ್ಳಲಾಗುವುದು ಎಂದು ಭರವಸೆ ನೀಡಿದ ನಂತರ ವಿದ್ಯಾರ್ಥಿಗಳು ಪ್ರತಿಭಟನೆಯಿಂದ ಹಿಂದೆ ಸರಿದರು. ಈ ಘಟನೆಯಿಂದ ಮೂರು ತಾಸಿಗೂ ಹೆಚ್ಚುಕಾಲ ರಸ್ತೆ ಸಂಚಾರಕ್ಕೆ ಅಡಚಣೆಯಾಗಿತ್ತು. ಗ್ರಾಪಂ ಸದಸ್ಯ ಧರ್ಮು ರಾಠೋಡ, ಪರಶುರಾಮ ಹಗರಗಿ, ಸುನೀಲ ಬಿರಾದಾರ, ಮುದುಕು ಪೋಲೇಶಿ, ಪರಶುರಾಮ ಮಾದರ, ವಿದ್ಯಾರ್ಥಿಗಳಾದ ಶರೀಪ್ ಕೊರಬು, ಸಾಗರ ಬಿರಾದಾರ, ದೇವಿಂದ್ರ ಬಂಥನಾಳ, ಸಾನಿಕ ಬಿರಾದಾರ, ಭಾಗ್ಯಶ್ರೀ ಹರಿಜನ, ಸಿಂಬ್ರಾನ್ ಕೊರಬು ಭಾಗವಹಿಸಿದ್ದರು.

# ಶಿವಾಜಿ ವೃತ್ತದಲ್ಲಿ ಪ್ರತಿ ಸೋಮವಾರದ ಅನ್ನದಾಸೋಹಕ್ಕೆ ಚಾಲನೆ

**ಉದಯರಶ್ಮಿ ನ್ಯೂಸ್**

ವಿಜಯಪುರ: ನಗರದ ಶಿವಾಜಿ ವೃತ್ತದಲ್ಲಿ ಶ್ರೀ ಗಜಾನನ ಉತ್ಸವ ಮಹಾ ಮಂಡಳ ವತಿಯಿಂದ ಅನ್ನದಾಸೋಹ ಕಾರ್ಯಕ್ರಮ ನಡೆಯಿತು.



ಜ್ಞಾನಯೋಗಾಶ್ರಮದ ಅಧ್ಯಕ್ಷ ಗುರುಗಳಾದ ಬಸವಲಿಂಗ ಸ್ವಾಮೀಜಿ ಪೂಜೆ ಮಾಡುವ ಮೂಲಕ ದಾಸೋಹಕ್ಕೆ ಚಾಲನೆ ನೀಡಿದರು.

ಗಣೇಶ ಭಕ್ತರಿಗಾಗಿ 3 ಕ್ವಿಂಟಾಲ್ ಅನ್ನ, ಒಂದು ಕ್ವಿಂಟ್ವಾಲ್ ಸಜ್ಜಕ ಮಾಡಿಸಲಾಗಿತ್ತು. 3000 ಕ್ಕೂ ಅಧಿಕ ಭಕ್ತಾಧಿಗಳು ಪ್ರಸಾದ ಸೇವನೆ ಮಾಡಿದರು.

ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಬಸವಲಿಂಗ ಸ್ವಾಮೀಜಿ, ಅನ್ನ ದಾಸೋಹ ಕಾರ್ಯಕ್ರಮ ಅಚ್ಚುಕಟ್ಟಾಗಿ ಮಾಡಲಾಗಿದೆ. ವಿಜಯಪುರದ ಶಿವಾಜಿ ವೃತ್ತದಲ್ಲಿಯೂ ಇನ್ನು ಮುಂದೆ ಪ್ರತಿ ಸೋಮವಾರ ಅನ್ನದಾಸೋಹ ಹಮ್ಮಿಕೊಂಡದಕ್ಕೆ ಅಭಿನಂದನೆ ಸಲ್ಲಿಸಿದರು. ನಿರಂತರವಾಗಿ ಜ್ಞಾನಯೋಗಾಶ್ರಮದಲ್ಲಿ ಅನ್ನಪ್ರಸಾದ ಇರುತ್ತದೆ. ಇದೀಗ ಶಿವಾಜಿ ವೃತ್ತದಲ್ಲೂ ದಾಸೋಹ ಕಾರ್ಯಕ್ರಮ ಮಾಡುತ್ತಿರುವುದು ಸಂತಸ ತಂದಿದೆ ಎಂದರು. ವಿಜಯಪುರ ಜಿಲ್ಲೆ ದಾಸೋಹಕ್ಕೆ ಹೆಸರುವಾಸಿಯಾಗಿದೆ. ಇಂತಹ ಜಿಲ್ಲೆಯಲ್ಲಿ ಗಜಾನನ ಉತ್ಸವ ಮಹಾಮಂಡಳ ಸಂಸ್ಥಾಪಕ ಅಧ್ಯಕ್ಷರಾದ ಮಾಜಿ ಸಚಿವರಾದ ಅಪ್ಪಾಸಾಹೇಬ್ ಪಟ್ಟಣಶೆಟ್ಟಿ ನೇತೃತ್ವದಲ್ಲಿ ಮಹಾ ಮಂಡಳಿಯವರು ಪ್ರತಿ ಸೋಮವಾರ ದಾಸೋಹ ಹಮ್ಮಿಕೊಂಡಿರುವುದು ಹೆಮ್ಮೆಯ ಸಂಗತಿ ಎಂದರು. ಭಕ್ತಾದಿಗಳು ಅನ್ನ ಪ್ರಸಾದ ಸದುಪಯೋಗ ಪಡೆದುಕೊಳ್ಳಬೇಕು ಎಂದ ಶ್ರೀಗಳು ಸಲಹೆ ನೀಡಿದರು.

ಸಿದ್ದೇಶ್ವರ ಸಹಕಾರಿ ಬ್ಯಾಂಕ್ ನಿರ್ದೇಶಕ ಈರಣ್ಣ ಪಟ್ಟಣಶೆಟ್ಟಿ ಮಾತನಾಡಿ, ಸುಮಾರು 25 ವರ್ಷಗಳಿಂದ ಮಹಾಮಂಡಳ ವತಿಯಿಂದ ಧಾರ್ಮಿಕ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಹಮ್ಮಿಕೊಂಡು ದೇವರ ಆರಾಧನೆಯಲ್ಲಿ ಪಾಲ್ಗೊಳ್ಳಲು ಪ್ರೇರೇಪಣೆ ನೀಡಿದ್ದು ಹೆಮ್ಮೆಯ ಸಂಗತಿಯಾಗಿದೆ. ಅದೇ ರೀತಿ ಅನ್ನ ದಾಸೋಹ ಕಾರ್ಯಕ್ರಮವೂ ವಿದ್ಯಾರ್ಥಿಗಳಿಗೆ, ಕೂಲಿ ಕಾರ್ಮಿಕರಿಗೆ ಅನುಕೂಲವಾಗಲಿದೆ. ಹಲವು ದಿನಗಳಿಂದ ಈ ಕಾರ್ಯ ಮಾಡಬೇಕು ಎಂದು ಚಿಂತನೆ ಮಾಡಲಾಗಿತ್ತು. ಮಹಾಮಂಡಳ ಅಧ್ಯಕ್ಷ ಅಪ್ಪಾಸಾಹೇಬ್ ಪಟ್ಟಣಶೆಟ್ಟಿ ಅವರ ಮಾರ್ಗದರ್ಶನದಲ್ಲಿ ಇನ್ನು ಮುಂದೆ ಪ್ರತಿ ಸೋಮವಾದ ಈ ಕಾರ್ಯಕ್ರಮ ನಡೆಯಲಿದೆ ಎಂದರು.

ಕಾರ್ಯಕ್ರಮದಲ್ಲಿ ಮಾಜಿ ಉಪ ಮೇಯರ್ ಗೋಪಾಲ್ ಘಟಕಾಂಬಳೆ. ಮಾಜಿ ಬಿಡಿಎ ಅಧ್ಯಕ್ಷ ಭೀಮಾಶಂಕರ ಹದನೂರು, ಮಾಜಿ ಪಾಲಿಕೆ ಸದಸ್ಯ ಅಪ್ಪು ಸಜ್ಜನ, ರಮೇಶ ರೇಶ್ಮಿ, ಸಂತೋಷ ಜಾಧವ, ವಿನಾಯಕ ದೈಹಿಂಡೆ, ಕಾಂತು ಸಿಂಧೆ, ಜಗದೀಶ ಮುಚ್ಚಂಡು, ಅನೀಲ್ ಉಪ್ಪಾರ. ನಿಖೀಲ ವ್ಯಾಗೇರಿ, ಆನಂದ ಮುಚಂಡಿ, ಮಂಜು ಘಾಟಗೆ, ಪ್ರಫುಲ್ ಪವಾರ, ಮಾರುತಿ ಮೋರೆ, ಸನ್ನಿ ಗವಿಮಠ ಸೇರಿದಂತೆ ಮಹಾಮಂಡಳದ ಕಾರ್ಯಕರ್ತರು ಉಪಸ್ಥಿತರಿದ್ದರು.

# ಅಭಿವೃದ್ಧಿ ವಿಚಾರಕ್ಕೆ ಶಾಸಕರಿಗೆ ಸಂಪೂರ್ಣ ಸಹಕಾರ :ಸೋಮನಗೌಡ

**ಉದಯರಶ್ಮಿ ನ್ಯೂಸ್**

ದೇವರ ಹಿಪ್ಪರಗಿ: ಸಿದ್ದೇಶ್ವರ ಶ್ರೀಗಳ ಆಸೆಯಂತೆ ರೈತರಿಗಾಗಿ ನನ್ನ ಐದು ವರ್ಷದ ಅಧಿಕಾರ ಅವಧಿಯಲ್ಲಿ ಕ್ಷೇತ್ರದ ಸಾವಿರಾರು ಎಕರೆ ನೀರಾವರಿ ಮಾಡುವುದಕ್ಕಾಗಿ ನೂರಾರು ಕೋಟಿ ಅನುದಾನ ತಂದು ನೀರಾವರಿ ಕಾಮಗಾರಿಗಳು ಮಾಡಿರುವುದು ನನಗೆ ತೃಪ್ತಿಯಿದೆ ಎಂದು ಮಾಜಿ ಶಾಸಕ ಸೋಮನಗೌಡ ಪಾಟೀಲ ಸಾಸನೂರ ಹೇಳಿದರು.



ಮತಕ್ಷೇತ್ರದ ಚಿಕ್ಕರೋಗಿ ಗ್ರಾಮದಲ್ಲಿ ಮಂಗಳವಾರದಂದು ಗಂಗಾ ಪೂಜೆ ಹಾಗೂ ಬ್ರಿಜ್, ಕಮ್ ಬಾಂದಾರು ಲೋಕಾರ್ಪಣಾ ಸಮಾರಂಭ ಉದ್ಘಾಟಿಸಿ ಮಾತನಾಡಿದ ಅವರು, ರಾಜಕಾರಣಿಗಳಿಗೆ ಅಧಿಕಾರ ಶಾಶ್ವತ ಅಲ್ಲ, ಅಧಿಕಾರ ಅವಧಿಯಲ್ಲಿ ಮಾಡಿರುವ ಕಾಮಗಾರಿಗಳು ಕ್ಷೇತ್ರದ ಜನಸಾಮಾನ್ಯರಿಗೆ ಸಮರ್ಪಕವಾಗಿ ತಲುಪುವಂತಾಗಬೇಕು. ಇನ್ನು ಕೆಲವು ನೀರಾವರಿ ಕಾಮಗಾರಿಗಳು ಪೂರ್ಣಗೊಳ್ಳಬೇಕಾದರೆ ಈಗಿನ ಶಾಸಕರು ಸರ್ಕಾರದ ಮೇಲೆ ಒತ್ತಡ ತಂದು ಇನ್ನಷ್ಟು ಅನುದಾನ ಬಿಡುಗಡೆಗೊಳಿಸಿ ಇನ್ನುಳಿದ ಕಾಮಗಾರಿಗಳು ಪೂರ್ಣಗೊಳಿಸಿ ಕ್ಷೇತ್ರದ ರೈತರಿಗೆ ಅನುಕೂಲ ಮಾಡಿಕೊಡಬೇಕು. ಅದಕ್ಕಾಗಿ ನನ್ನ ಸಲಹೆ, ಸಹಕಾರ ಈಗಿನ ಶಾಸಕರಿಗೆ ಕೊಡುತ್ತೇನೆ. ನನ್ನ ಅಧಿಕಾರ ಅವಧಿಯಲ್ಲಿ ಆದ ಕಾಮಗಾರಿ ಈಗ ನನ್ನಿಂದಲೇ ಲೋಕಾರ್ಪಣೆ ಮಾಡಿಸಿ ನನಗೆ ಚಿಕ್ಕರೂಗಿ ಗ್ರಾಮದ ರೈತರಿಗೆ ನಾನು ಚಿರಋಣಿಯಾಗಿರುತ್ತೇನೆ. ಕ್ಷೇತ್ರದ ಜನರ ಸಮಸ್ಯೆಗೆ ನಾನು ಸದಾ ಸ್ಪಂದಿಸುತ್ತೇನೆ ಎಂದು ಹೇಳಿದರು.

ಬಿಜೆಪಿ ಜಿಲ್ಲಾ ಮುಖಂಡ ರಮೇಶ ಮಸಬಿನಾಳ. ಗ್ರಾಮದ ಹಿರಿಯರಾದ ಎಬಿ ಕುಂಡಗೋಳಿ. ಮಾತನಾಡಿ. ಶಾಸಕರು ತಮ್ಮ ಅಧಿಕಾರವಧಿಯಲ್ಲಿ ರೈತರಿಗೆ ಬೇಕಾದ ನೀರಾವರಿ ಕಾಮಗಾರಿ ಹಾಗೂ ಹೊಲಗದ್ದೆಗಳಿಗೆ ಹೋಗುವ ರಸ್ತೆಗಳು ಸೇರಿದ ವಿವಿಧ ಅಭಿವೃದ್ಧಿ ಕಾಮಗಾರಿಗಳು ಮಾಡಿದ್ದಾರೆ. ಶಾಸಕರ ಪ್ರಯತ್ನದ ಫಲದಿಂದ ಇಂದು ಕ್ಷೇತ್ರದ ಬಹುತೇಕ ಕೆರೆಗಳು ತುಂಬಿರುವುದರಿಂದ ಕಬ್ಬು ಸೇರಿದಂತೆ ವಿವಿಧ ತೋಟಗಾರಿಕಾ ಬೆಳೆ ಬೆಳೆದು ನಾವು ಆರ್ಥಿಕವಾಗಿ ಸಬಲರಾಗಿದ್ದೇವೆ ಎಂದು ಹೇಳಿದರು.

ಸಮಾರಂಭದಲ್ಲಿ ಗ್ರಾಮದ ಮುಖಂಡರಾದ ನಾಗಣ್ಣ ಮುಳುಜಿ. ಶಾಂತಪ್ಪ ಬಾಗಲಕೋಟೆ. ಎಮ್ ಡಿ ಕಣಮೇಶ್ವರ. ಹಣಮಂತ ಕುಂಬಾರ. ಸಿದ್ದಾರ್ಥ ಮೊಳಸಾವಳಗಿ. ಸೋಮಣ್ಣ ಬಾಗಲಕೋಟ. ಅಪ್ಪಸಾಹಬ ಸಾಹೂ. ಬಸವರಾಜ ಕುಂಬಾರ. ವಿಠಲಗೌಡ ಬಿರಾದಾರ. ಶಂಕರಗೌಡ ಪಾಟೀಲ. ರುದ್ರಗೌಡ ಚೌದರಿ. ಸೇರಿದಂತೆ ಚಿಕ್ಕರೋಗಿ ಕಡ್ಲೆವಾಡ ಗ್ರಾಮದ ಹಿರಿಯರು ಇದ್ದರು.

# ಡಿ.10ರಂದು ಅಬ್ಬಿಗೇರಿ ದಂಪತಿಯ 15 ಕೃತಿಗಳ ಲೋಕಾರ್ಪಣೆ

**ಉದಯರಶ್ಮಿ ನ್ಯೂಸ್**





ಬೆಳಗಾವಿ: ಜಿಲ್ಲಾ ಲೇಖಕಿಂರ ಸಂಘ ಬೆಳಗಾವಿ ಹಾಗೂ ಲೋಕವಿದ್ಯಾ ಪ್ರಕಾಶನ ಸಂಕೇಶ್ವರ ಇವರ ಸಂಯುಕ್ತ ಆಶ್ರಯದಲ್ಲಿ ಉಪನ್ಯಾಸಕಿ, ಲೇಖಕಿ ಜಯಶ್ರೀ ಮತ್ತು ಜಯಪ್ರಕಾಶ ಅಬ್ಬಿಗೇರಿ ದಂಪತಿಗಳ 15 ಕೃತಿಗಳ ಲೋಕಾರ್ಪಣೆ ಸಮಾರಂಭ ಡಿ.10 ರಂದು ಬೆಳಿಗ್ಗೆ 10.30 ಗಂಟೆಗೆ ನಗರದ ಕನ್ನಡ ಸಾಹಿತ್ಯ ಭವನದಲ್ಲಿ ನಡೆಯಲಿದೆ.

ಉಪನ್ಯಾಸಕಿ, ಚಿಂತಕಿ, ಅಂಕಣಕಾರ್ತಿ, ಲೇಖಕಿ ಜಯಶ್ರೀ ಅಬ್ಬಿಗೇರಿ ಅವರ ನಿಮ್ಮನ್ನು ನೀವು ಯಶಸ್ವಿ ವ್ಯಕ್ತಿ ಎಂದು ಭಾವಿಸಿ, ಮೆಲ್ಲ ಮೆಲ್ಲ ಈ ಪ್ರೀತಿ ಮೆಲ್ಲುವಾ, ಜೀವನದಿ, ಜೀವ ನೀಡುವ ಜೀವ ಅಪಾಯದಲ್ಲಿದೆ, ವಚನ ವಾಹಿನಿ, ಸೋಲಿನ ಸುಳಿಯಲ್ಲಿ ಗೆಲುವಿನ ತುದಿ ಇದೆ, ಕುಂತರೂ ನಿಂತರೂ ನಿನ್ನದೇ ತುಂತುರು, ಹಬ್ಬ ಬಂತು ಹಬ್ಬ, ಸೋಲು ಒಪ್ಪಿಕೊಳ್ಳುವ ಮುನ್ನ ಕೊಂಚ ಪ್ರಶ್ನಿಸಿಕೊಳ್ಳಿ, ಮನೋಲ್ಲಾಸ ಭಾಗ-1, ಮನೋಲ್ಲಾಸ ಭಾಗ-2 ಹಾಗೂ ಹಾಸ್ಯ ಸಾಹಿತಿ ಜಯಪ್ರಕಾಶ ಅವರ ಶ್ರೀಮತಿಗಳ ಶೃಂಗಸಭೆಗಳು, ಬಾನುಲಿ ನಗೆ, ಹೃದಯವೀಣೆ ಮಿಡಿದಾಗ ಕೃತಿಗಳು ಹಾಗೂ ಡಾ. ಸಿದ್ದನಗೌಡ ಪಾಟೀಲ ಅವರ ನಾಲ್ಕು ಕೃತಿಗಳ ಲೋಕಾರ್ಪಣೆ ನಡೆಯಲಿದೆ ಎಂದು ಪ್ರಕಟಣೆ ತಿಳಿಸಿದೆ.

# ಡಿ.7ರಂದು ಭಗವದ್ಗೀತಾ ಅಭಿಯಾನ ಸಪ್ತಾಹ ಉದ್ಘಾಟನೆ

**ಉದಯರಶ್ಮಿ ನ್ಯೂಸ್**

ಮುದ್ದೇಬಿಹಾಳ: ಸರ್ವಜ್ಞೇಂದ್ರ ಸರಸ್ವತೀ ಪ್ರತಿಷ್ಠಾನ ಶ್ರೀಮಜ್ಜಗದ್ಗುರು ಶಂಕರಾಚಾರ್ಯ ಸೋಂದಾ ಸ್ವರ್ಣವಲ್ಲೀ ಸಂಸ್ಥಾನ ಶಿರಸಿ, ಮತ್ತು ಶ್ರೀ ಪವಾಡ ಬಸವೇಶ್ವರ ಆಶ್ರಮ ಭಕ್ತವೃಂದ ಹಾಗೂ ಮಹರ್ಷಿ ವಾಲ್ಮೀಕಿ ವಿದ್ಯಾ ವರ್ಧಕ ಸಂಸ್ಥೆಯ ಚೇತನ ಹಿರಿಯ ಪ್ರಾಥಮಿಕ ಶಾಲೆ ಮುದ್ದೇಬಿಹಾಳ ಇವರ ಸಹಯೋಗದಲ್ಲಿ ತಾಲೂಕಾ ಮಟ್ಟದ ಭಗವದ್ಗೀತಾ ಅಭಿಯಾನ-2023 ಸಪ್ತಾಹದ ಉದ್ಘಾಟನಾ ಸಮಾರಂಭವನ್ನು ಡಿ.7 ರಂದು ಸಂಜೆ 5 ಗಂಟೆಗೆ ಪಟ್ಟಣದ ಹಡಲಗೇರಿ ರಸ್ತೆಯ ಮಾರ್ಗದಲ್ಲಿ ಬರುವ ಪವಾಡ ಬಸವೇಶ್ವರ ಆಶ್ರಮದಲ್ಲಿ ಆಯೋಜಿಸಲಾಗಿದೆ.

ಆಶ್ರಮದ ಚನ್ನಮಲ್ಲಪ್ಪ ಶರಣರು ಉದ್ಘಾಟಿಸಲಿದ್ದು, ಅಧ್ಯಕ್ಷ ಬಸವರಾಜ ಮೋಟಗಿ ಅಧ್ಯಕ್ಷತೆ ವಹಿಸಿಕೊಳ್ಳಲಿದ್ದಾರೆ. ಪ್ರಾಪಂಚಿಕ ಬದುಕಿಗೊಂದು ಭಗವದ್ಗೀತೆ ಎನ್ನುವ ವಿಷಯದ ಮೇಲೆ ತಾಳಿಕೋಟೆಯ ಬಾಲ ಭಾರತಿ ವಿದ್ಯಾ ಮಂದಿರದ ಕಾರ್ಯದರ್ಶಿಗಳಾದ ಚಿದಂಬರ ಕರಮರಕರ ಉಪನ್ಯಾಸ ನೀಡಲಿದ್ದಾರೆ.

ಮುಖ್ಯ ಅತಿಥಿಗಳಾಗಿ ಚೇತನ ಹಿ.ಪ್ರಾ.ಶಾಲೆಯ ಅಧ್ಯಕ್ಷ ಈರಣ್ಣ ತಳವಾರ, ಕ.ಸಾ.ಪ ನಿಕಟಪೂರ್ವ ಅಧ್ಯಕ್ಷ ಎಮ್.ಬಿ.ನಾವದಗಿ, ಪುರಸಭೆ ಸದಸ್ಯೆ ಸೋನಾಬಾಯಿ ನಾಯಕ ಹಾಗೂ ಜ್ಞಾನ ಭಾರತಿ ವಿದ್ಯಾ ಮಂದಿರದ ಅಧ್ಯಕ್ಷ ಬಿ.ಪಿ.ಕುಲಕರ್ಣಿ, ಜಿಲ್ಲಾ ಅಧ್ಯಕ್ಷ ಪ್ರಭು ಎಸ್.ಕಡಿ, ಜಿಲ್ಲಾ ಭಗವದ್ಗೀತಾ ಅಭಿಯಾನ ಸಮಿತಿಯ ಉಪಾಧ್ಯಕ್ಷ ಡಾ.ಪರಶುರಾಮ ಪವಾರ, ಚೇತನ ಹಿ.ಪ್ರಾ.ಶಾಲೆಯ ಮುಖ್ಯಗುರು ಎಸ್.ಎಸ್.ಪೂಜಾರಿ ಸೇರಿದಂತೆ ಇತರರು ಉಪಸ್ಥಿತರಿರಲಿದ್ದಾರೆ ಎಂದು ಅಭಿಯಾನದ ಸಂಚಾಲಕ ಹಾಗೂ ಜ್ಞಾನ ಭಾರತಿ ವಿದ್ಯಾ ಮಂದಿರ ಪ್ರೌಢ ಶಾಲೆ ಮುಖ್ಯಗುರು ರಾಮಚಂದ್ರ ಹೆಗಡೆ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಉದಯರಶ್ಮಿ

ನೀವೂ ಬರೆಯಿರಿ..

ನಿಮ್ಮೂರಿನ, ನಿಮ್ಮ ಸುತ್ತಮುತ್ತಲಿನ ಸಮಸ್ಯೆಗಳ ಮೇಲೆ ನೀವೂ ಬೆಳಕು ಚೆಲ್ಲಬಹುದು, ಸಾಮಾಜಿಕ ಸಮಸ್ಯೆಗಳು ಹಾಗೂ ಮಾನವಿಯ ಕಳಕಳಿಯ ಬರಹಗಳನ್ನು ಸಂಬಂಧಿಸಿದ ಫೋಟೊದೊಂದಿಗೆ ನಮಗೆ ಕಳುಹಿಸಿ, 'ಉದಯರಶ್ಮಿ' ದಿನಪತ್ರಿಕೆಯಲ್ಲಿ ಆದ್ಯತೆಯ ಮೇಲೆ ಪ್ರಕಟಿಸಲಾಗುವುದು.

– ಸಂಪಾದಕ

ಇಲ್ಲಿ ಕಳುಹಿಸಿ.. Whatsapp : 7026028778

email: editor.udayarashmi@gmail.com

### ಮಿನಿ ವಿಧಾನಸೌಧ, ಬಸ್ ಡಿಪ್ೋ, ವಿದ್ಯುತ್ ಬಿಲ್ ಕೌಂಟರ್, ರೈತ ಸಂಪರ್ಕ ಕೇಂದ್ರ ಮತ್ತು ಕೆರೆ ನಿರ್ಮಿಸಲು ಗ್ರಾಮಸ್ಥರ ಆಗ್ರಹ

# ಕಲಕೇರಿ ಹೋಬಳಿಯಾಗಿಸಿ ಮೂಲಸೌಲಭ್ಯ ಒದಗಿಸಲು ಆಗ್ರಹ

**ಉದಯರಶ್ಮಿ ನ್ಯೂಸ್**

ಕಲಕೇರಿ: ವಿಜಯಪುರ ಜಿಲ್ಲೆಯ ತಾಳಿಕೋಟಿ ತಾಲೂಕಿನ ಕಲಕೇರಿ ಗ್ರಾಮವನ್ನು ಹೋಬಳಿಯನ್ನಾಗಿಸುವ ಸಲುವಾಗಿ 2003 ರಿಂದಲೂ ಹೋರಾಟ ಮಾಡುತ್ತಾ ಬಂದಿದ್ದು ಯಾರೂ ಈ ಕಡೆ ಗಮನ ಹರಿಸುತ್ತಿಲ್ಲ. ಈಗಲಾದರೂ ಕಲಕೇರಿಯನ್ನು ಹೋಬಳಿ ಎಂದು ಘೋಷಿಸಿ ಮೂಲ ಸೌಲಭ್ಯಗಳನ್ನು ಒದಗಿಸಿ ರೈತರು, ಕೂಲಿಕಾರ್ಮಿಕರು, ಬಡವರು ಮತ್ತು ಸಾರ್ವಜನಿಕರ ಸಮಸ್ಯೆಯನ್ನು ನಿವಾರಿಸಲು ಮುಂದಾಗಬೇಕು ಇಲ್ಲದಿದ್ದರೆ ಉಗ್ರ ಹೋರಾಟ ಮಾಡಲಾಗುವುದು ಎಂದು ಗ್ರಾಮದ ಮುಖಂಡರಾದ ಡಾ.ಈರಣ್ಣ ಗುಮಶೆಟ್ಟಿ, ಯಮನೂರಿ ಕುಲಕರ್ಣಿ ಸೇರಿದಂತೆ ಅನೇಕ ಮುಖಂಡರು ಆಗ್ರಹಿಸಿದರು.

ಗ್ರಾಮದ ಮುಖಂಡರು ಮತ್ತು ಪ್ರಗತಿಪರ ಚಿಂತಕರು ಕಲಕೇರಿಯನ್ನು ಹೋಬಳಿ ಮಾಡುವಂತೆ ಆಗ್ರಹಿಸಿ ಪ್ರವಾಸಿ ಮಂದಿರದಲ್ಲಿ ಕರೆಯಲಾದ ಪತ್ರಿಕಾ ಸಭೆಯಲ್ಲಿ ಅವರು ಮಾತನಾಡಿದರು.

ಮುಖಂಡರಾದ ಯಮನೂರಿ ಕುಲಕರ್ಣಿಯವರು ಮಾತನಾಡಿ, ಅದಿವೇಶನದಲ್ಲಿ ಉತ್ತರ ಕರ್ನಾಟಕದ ಸಮಸ್ಯೆಯನ್ನು ಚರ್ಚಿಸಲು ಎರಡು ದಿನಗಳನ್ನು ಮೀಸಲಿಟ್ಟಿದ್ದು, ಈ ನಿಟ್ಟಿನಲ್ಲಿ ನಾವು ಆಗ್ರಹಪಡಿಸುವುದೇನೆಂದರೆ ದಯವಿಟ್ಟು ಕಲಕೇರಿ ಗ್ರಾಮವನ್ನು ಹೋಬಳಿ ಮಾಡಿ ಇಲ್ಲಿನ ಸುತ್ತಮುತ್ತಲಿನ ಸುಮಾರು 40 ಹಳ್ಳಿಗಳ ಜನರ ಸಮಸ್ಯೆಯನ್ನು ನಿವಾರಿಸಲು ಮುಂದಾಗಬೇಕು ಹಾಗೂ ಗ್ರಾಮದ ಪ್ರಮುಖ ಬೇಡಿಕೆಗಳಾದ ರೈತ ಸಂಪರ್ಕ ಕೇಂದ್ರ ಇಲ್ಲದ್ದರಿಂದ 30 ರಿಂದ 35 ಕೀ.ಮಿ ಅಲೆದಾಡುವ



ಪರಿಸ್ಥಿತಿ ನಿರ್ಮಾಣವಾಗಿದ್ದು ಕೂಡಲೇ ರೈತ ಸಂಪರ್ಕ ಕೇಂದ್ರ ಸ್ಥಾಪಿಸುವುದು ಮತ್ತು ಸಾರಿಗೆ ಸಚಿವ ರಾಮಲಿಂಗಾರಡ್ಡಿಯವರು ಇತ್ತ ಗಮನ ಹರಿಸಿ ಬಸ್‌ಸ್ಟ್ಯಾಂಡ್ ಸುಧಾರಣೆ ಕಾರ್ಯ ಮಾಡಬೇಕು, ಬಹಳ ದಿನಗಳ ಬೇಡಿಕೆಯಾದ ಮಿನಿ ಬಸ್ ಡಿಪೋಗಾಗಿ ಜಾಗದ ಲಭ್ಯತೆಯಿದ್ದು ಕೂಡಲೇ ಮಿನಿ ಬಸ್‌ಡಿಪೋ ಮಾಡಬೇಕು, ಕುದರಗುಂಡ ಮತ್ತು ಹುಣಶ್ಯಾಳ ಕೆರೆ ತುಂಬುವ ಯೋಜನೆ ಇನ್ನೂ ಪೂರ್ಣವಾಗಿಲ್ಲ, ಮಾನ್ಯ ಮುಖ್ಯ ಮಂತ್ರಿಗಳು, ಕಂದಾಯ ಸಚಿವರು, ನಮ್ಮ ಜಿಲ್ಲಾ ಉಸ್ತುವಾರಿ ಸಚಿವರು ಇತ್ತ ಕಡೆ ಗಮನಹರಿಸಿ ಕೂಡಲೇ ಕಲಕೇರಿಯನ್ನು ಹೋಬಳಿ ಮಾಡಿ ಜನರ ಬವಣೆಯನ್ನು ತಪ್ಪಿಸಬೇಕೆಂದು ಹೇಳಿದರು.

ಮುಖಂಡರಾದ ಡಾ.ಈರಣ್ಣ ಗುಮಶೆಟ್ಟಿಯವರು ಮಾತನಾಡಿ, ಸುಮಾರು 15-20 ಸಾವಿರ ಜನಸಂಖ್ಯೆ ಇರುವ ಕಲಕೇರಿಯಲ್ಲಿ ಪ್ರತಿದಿನ 1.5 ದಿಂದ 2 ಲಕ್ಷದ ವರೆಗೆ ಬಿಲ್ ಸಂಗ್ರಹವಾಗುತ್ತಿದ್ದರೂ ವಿದ್ಯುತ್ ಬಿಲ್ ಕೌಂಟರ್ ಇಲ್ಲದ ಕಾರಣ ಯಾವುದೇ ಸಮಸ್ಯೆಯಾದರೂ ಕೋರವಾರಕ್ಕೆ ಹೋಗಬೇಕಾದ ಪರಿಸ್ಥಿತಿ ಇದ್ದು, ಕಲಕೇರಿಯಲ್ಲಿ ಈಗಾಗಲೇ ನಿರ್ಮಾಣವಾಗಿರುವ ಕಛೇರಿಯಲ್ಲಿ ಬಿಲ್ ಕೌಂಟರ್, ವಿಚಾರಣೆ ಮತ್ತು ಮಂಜೂರು ಮಾಡುವ ಶಾಖೆ ಪ್ರಾರಂಭಿಸಬೇಕು ಮತ್ತು ಕೆಂಭಾವಿಯಿಂದ ಕಲಕೇರಿ ದೇವರಹಿಪ್ಪರಗಿ ರಾಜ್ಯ ಹೆದ್ದಾರಿ ರಸ್ತೆ ನಿರ್ಮಾಣ ಮಾಡುವುದು ಅತ್ಯಂತ ಅವಶ್ಯವಾಗಿದ್ದು, ಇದರಿಂದ ಹಣ ಮತ್ತು ಸಮಯದ ಉಳಿತಾಯವಾಗುತ್ತದೆ ಮತ್ತು ಕಲಕೇರಿಯಲ್ಲಿ ವಿವಿಧ ಸರಕಾರಿ ಇಲಾಖೆಗಳನ್ನೊಳಗೊಂಡ ಮಿನಿ ವಿಧಾನಸೌಧ ನಿರ್ಮಾಣ ಮತ್ತು ಕಲಕೇರಿಗೆ ಒಂದು ಕೆರೆ ಮಂಜೂರು ಮಾಡಿ ನೀರು ತುಂಬಿಸುವ ಕಾರ್ಯ ಮಾಡುವುದು ಅತ್ಯಂತ ಅವಶ್ಯಕವಾಗಿದ್ದು, ಈ ನಿಟ್ಟಿನಲ್ಲಿ ಕಲಕೇರಿಯನ್ನು ಕೂಡಲೇ ಹೋಬಳಿ ಕೇಂದ್ರವನ್ನಾಗಿ ಘೋಷಿಸಿ ವಿವಿಧ ಮೂಲ ಸೌಲಭ್ಯಗಳನ್ನು ಒದಗಿಸಿ ಈ ಭಾಗದ ಜನರ ಸಮಸ್ಯೆ ನಿವಾರಿಸಲು ಮುಂದಾಗಬೇಕು ಇಲ್ಲವಾದರೆ ಉಗ್ರ ಹೋರಾಟ ಮಾಡಲಾಗುವುದು ಎಂದು ಹೇಳಿದರು.

ಪತ್ರಿಕಾ ಸಭೆಯಲ್ಲಿ ನಾನಾಗೌಡ ಚೌಧರಿ, ಬಾಪು ದೇಸಾಯಿ, ರಾಜು ದೇಸಾಯಿ, ವೀರೇಶ ಆಲಗೂರ ಸೇರಿದಂತೆ ಇತರರು ಇದ್ದರು.

### ಸಂಸ್ಕೃತ ಪಾಠಶಾಲಾ ಶಿಕ್ಷಕರಿಗೆ ವಿಶೇಷ ತರಬೇತಿ ಸೇತುಬಂಧ 2023-24ನೆಯ ಸಾಲಿನ ಪುನಶ್ಚೇತನ ಶಿಬಿರ ಉದ್ಘಾಟನೆ

# ಸಂಸ್ಕೃತ ಅಧ್ಯಯನದಿಂದ ಸಂಸ್ಕಾರ ಸಾಧ್ಯ :ಡಾ.ಪ್ರಭುಸಾರಂಗದೇವ ಶ್ರೀ

**ಉದಯರಶ್ಮಿ ನ್ಯೂಸ್**

ಸಿಂದಗಿ: ಸಂಸ್ಕೃತ ಅಧ್ಯಯನದಿಂದ ಸಂಸ್ಕಾರ ಉಂಟಾಗುತ್ತದೆ. ಸಂಸ್ಕೃತ ಭಾಷೆ ಸಾಮಾನ್ಯ ಭಾಷೆಯಲ್ಲ. ಈ ಭಾಷೆ ದೇಶದೊಳಗೆ ಮಾತ್ರವಲ್ಲದೇ ವಿದೇಶಗಳಲ್ಲಿಯೂ ಪ್ರಸಿದ್ಧವಾಗಿದೆ ಎಂದು ಸಾರಂಗಮಠದ ಡಾ.ಪ್ರಭುಸಾರಂಗದೇವ ಶಿವಾಚಾರ್ಯರು ಹೇಳಿದರು.

ಪಟ್ಟಣದ ಸಾತವೀರೇಶ್ವರ ಸಭಾಭವನದಲ್ಲಿ ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯ, ಬೆಂಗಳೂರಿನ ಸಂಸ್ಕೃತ ನಿರ್ದೇಶನಾಲಯ ಹಾಗೂ ಶ್ರೀ ಪದ್ಮರಾಜ ಸಂಸ್ಕೃತ ವೇದ ಪಾಠಶಾಲೆಯ ಸಹಯೋಗದಲ್ಲಿ ಸಂಸ್ಕೃತ ಪಾಠಶಾಲಾ ಶಿಕ್ಷಕರಿಗೆ ವಿಶೇಷ ತರಬೇತಿ ಸೇತುಬಂಧ 2023-24ನೆಯ ಸಾಲಿನ ಪುನಶ್ಚೇತನ ಶಿಬಿರ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದ ಅವರು, ಸಂಸ್ಕೃತವು ವಿಶ್ವದಲ್ಲೇ ಮಾನ್ಯವಾದದ್ದು, ಸಂಸ್ಕಾರದಿಂದಲೇ ಜ್ಞಾನ ಸಿಗುವಂತಾಗಿದೆ. ಭಾರತೀಯ ಶ್ರೇಷ್ಠ ಗ್ರಂಥಗಳಾದ ಭಗವದ್ಗೀತೆ, ರಾಮಾಯಣ, ಮಹಾಭಾರತದಂತಹ ಎಲ್ಲ ಮಹಾಕಾವ್ಯಗಳ ಮೂಲ ಸಂಸ್ಕೃತವೇ ಆಗಿದೆ. ಇದಕ್ಕೆ ಮುಖ್ಯ ಕಾರಣವೆಂದರೆ ಸಂಸ್ಕೃತವು ಪ್ರಪಂಚದ ಅತ್ಯಂತ ಹಳೆಯ ಭಾಷೆ ಎಂಬ ಹೆಗ್ಗಳಿಕೆಗೆ ಪಾತ್ರವಾಗಿದೆ. ಅಂತಹ ಸಂಸ್ಕೃತವನ್ನು ತಿಳಿಸಿಕೊಡುವ ಶಿಕ್ಷಕರ ಪುನಶ್ಚೇತನ ಶಿಬಿರ ಸಂಪನ್ನವಾಗಲಿ ಎಂದರು.

ಈ ವೇಳೆ ಸಂಸ್ಕೃತ ಶಿಕ್ಷಣ ನಿರ್ದೇಶನಾಲಯದ ನಿರ್ದೇಶಕ ಪಾಲಯ್ಯ ಮಾತನಾಡಿ, ಶಿಕ್ಷಕರಿಗೆ ಹೊಸ ಉತ್ಸಾಹ, ಚೈತನ್ಯ ನೀಡುವುದೇ ಈ ಪುನಶ್ಚೇತನದ ಉದ್ದೇಶವಾಗಿದೆ. ಸಂಸ್ಕೃತವನ್ನು ಭಾರತದ ಅನೇಕ ಭಾಷೆಗಳ ತಾಯಿ ಎನ್ನಲಾಗುತ್ತದೆ. ಈಗ ಹೆಚ್ಚಿನ ವಿದ್ಯಾರ್ಥಿಗಳು ಸಾಂಪ್ರದಾಯಿಕ ಮತ್ತು ಆಧುನಿಕ ಸಂಸ್ಕೃತಿಯ ಶಿಕ್ಷಣವನ್ನು ತೆಗೆದುಕೊಳ್ಳುತ್ತಿದ್ದಾರೆ ಎಂದರು.

ಇದೇ ಸಂದರ್ಭದಲ್ಲಿ ಸಂಸ್ಕೃತ ಭಾರತಿ ಅಖಿಲ ಭಾರತೀಯ ಪ್ರಧಾನ ಕಾರ್ಯದರ್ಶಿ ಸತ್ಯನಾರಾಯಣ, ಸಿಂದಗಿ ತಾಲೂಕು ದಂಡಾಧಿಕಾರಿ ಪ್ರದೀಪಕುಮಾರ ಹಿರೇಮಠ ಮಾತನಾಡಿ, ಎಲ್ಲ ಜನಾಂಗದ ಅಭ್ಯುದಯವನ್ನು ಬಯಸುವ ಭಾಷೆಯೇ ಸಂಸ್ಕೃತ ಭಾಷೆ. ಇದನ್ನೂ ಎಲ್ಲರಿಗೂ ತಲುಪಿಸಿ ಬೆಳೆಸೋಣ, ಇದು ವಿಶ್ವದ ಅತ್ಯಂತ ಹಳೆಯ ಭಾಷೆಗಳಲ್ಲಿ ಒಂದಾಗಿದೆ. ಸಂಸ್ಕೃತವನ್ನು ದೇವಭಾಷೆ ಎಂದೂ ಕರೆಯುತ್ತಾರೆ. ಈ ಭಾಷೆ ಯುವಜನತೆಯನ್ನು ಮತ್ತೊಮ್ಮೆ ತನ್ನತ್ತ ಸೆಳೆಯುತ್ತಿದೆ ಎಂದು ಹೇಳಿದರು.

ಇದೇ ಸಂದರ್ಭದಲ್ಲಿ ಸಂಸ್ಕೃತ ಭಾರತಿ ಉತ್ತರ ಕರ್ನಾಟಕ ಪ್ರಾಂತ್ಯಾಧ್ಯಕ್ಷ ಜಿ.ಆರ್. ಅಂಬಲಿ, ಸಂಯೋಜಕ ಡಾ.ಮಲ್ಲನಗೌಡ ಎಸ್. ಸಂಸ್ಥೆಯ ಸಹ ನಿರ್ದೇಶಕ ಅಶೋಕ ವಾರದ ವೇದಿಕೆ ಮೇಲಿದ್ದರು.

ಕಾರ್ಯಕ್ರಮದಲ್ಲಿ ಮೈಸೂರ ವಲಯದ ವಿಷಯ ಪರಿವೀಕ್ಷಕ ಮಲ್ಲಣ್ಣ, ಮಲ್ಲೇಶ ಕಲ್ಮೇಶ, ಜಗದೀಶ



ಕರೆಪ್ಪನವರ, ಬಿ.ಬಿ.ಆರೇರ, ಚನ್ನು ಕತ್ತಿ ಸೇರಿದಂತೆ ಸಂಸ್ಕೃತ ಪಾಠಶಾಲಾ ಶಿಕ್ಷಕರು ಉಪಸ್ಥಿತರಿದ್ದರು.

# ಕನ್ನಡ ಸಾಹಿತ್ಯಕ್ಕೆ ಕನಕದಾಸರ ಕೊಡುಗೆ ಅನನ್ಯ :ಪ್ರೊ.ಹೆಗ್ಗನದೊಡ್ಡಿ




**ಉದಯರಶ್ಮಿ ನ್ಯೂಸ್**

ಸಿಂದಗಿ: ಕನಕದಾಸರ ರಚಿಸಿದ ಐದು ಕೃತಿಗಳು ಸರ್ವಕಾಲಿಕ ಉಪಯುಕ್ತವಾದಂತಹ ಕೃತಿಗಳು. ಅವುಗಳು ಇಂದಿನ ಯುವಕರಿಗೆ ಓದುವ ಮೂಲಕ ಮೌಲ್ಯಯುತ ಸಮಾಜ ನಿರ್ಮಾಣ ಮಾಡಲು ಸಾಧ್ಯವಿದೆ ಎಂದು ಎಚ್.ಜಿ.ಪದವಿ ಪೂರ್ವ ಕಾಲೇಜಿನ ಪ್ರಾಚಾರ್ಯ ಎ.ಆರ್. ಹೆಗ್ಗನದೊಡ್ಡಿ ಹೇಳಿದರು.

ಪಟ್ಟಣದ ಮಹಾವಿದ್ಯಾಲಯದ ಸಭಾಭವನದಲ್ಲಿ ಸಿ.ಎಂ ಮನಗೂಳಿ ಕಲಾ,ವಿಜ್ಞಾನ ಹಾಗೂ ವಾಣಿಜ್ಯ ಮಹಾವಿದ್ಯಾಲಯ, ಐಕ್ಯೂಎಸಿ, ಕನ್ನಡ ವಿಭಾಗ ಹಾಗೂ ಸಾಂಸ್ಕೃತಿಕ ವೇದಿಕೆಯ ಸಹಯೋಗದಲ್ಲಿ ಹಮ್ಮಿಕೊಂಡ ಕನ್ನಡ ಸಾಹಿತ್ಯಕ್ಕೆ ಕನಕದಾಸರ ಕೊಡುಗೆ ಕುರಿತು ಹಮ್ಮಿಕೊಂಡ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಕನಕದಾಸರ ಸಾಹಿತ್ಯ ಕನ್ನಡ ಸಾಹಿತ್ಯದಲ್ಲಿ ಅಜರಾಮರವಾಗಿದೆ. ಕನ್ನಡ ಸಾರಸತ್ವ ಲೋಕದಲ್ಲಿ ಅಪಾರವಾದ ಸ್ಥಾನವನ್ನು ಪಡೆಯುವ ಮೂಲಕ ಚಿರಸ್ಥಾಯಿಯಾಗಿ ಜನಮಾನಸದಲ್ಲಿ ಚಿರಸ್ಮರಣೀಯರಾಗಿದ್ದಾರೆ. ಕನಕದಾಸರ ಕೀರ್ತನೆಗಳನ್ನು ವಿದ್ಯಾರ್ಥಿಗಳು ಬದುಕಿನಲ್ಲಿ ಅಳವಡಿಸಿಕೊಂಡು ಜೀವನ ಸಾಗಿಸಬೇಕು ಎಂದರು,.

ಈ ವೇಳೆ ಸಾಹಿತಿ ಮ.ಚ.ಧರಿ ಮಾತನಾಡಿ, ಕನಕದಾಸರ ಚಿಂತನೆಗಳು ಸಾಹಿತ್ಯಕ್ಕೆ ನೀಡಿದ ಕೊಡುಗೆ ಅನನ್ಯ. ಮೌಢ್ಯತೆ ತುಂಬಿದ ಈ ಸಮಾಜದಲ್ಲಿ ತಮ್ಮ ಕೀರ್ತನೆಗಳ ಮುಖಾಂತರ ಸಮಾಜದ ಅಂಕು ಡೊಂಕುಗಳನ್ನು ತಿದ್ದುವಲ್ಲಿ ಅವರು ಅಪಾರ ಕೊಡುಗೆ ನೀಡಿದ್ದಾರೆ. ಆದ್ಯಾತ್ಮಿಕ, ಸಾಮಾಜಿಕ ಮತ್ತು ವೈಚಾರಿಕ ಪ್ರಜ್ಞೆ ತಿಳಿಸಿದ ಅವರ ತತ್ವ ಆದರ್ಶಗಳು ವಿದ್ಯಾರ್ಥಿಗಳಿಗೆ ದಾರಿದೀಪವಾಗಬೇಕು ಎಂದು ಸಲಹೆ ನೀಡಿದರು.

ಈ ವೇಳೆ ಪ್ರಾಚಾರ್ಯ ಡಾ.ಬಿ.ಜಿ ಪಾಟೀಲ ಕನ್ನಡ ಪ್ರಾಧ್ಯಾಪಕ ರಾಹುಲ ಕಾಂಬಳೆ ಸೇರಿದಂತೆ ಮಹಾವಿದ್ಯಾಲಯದ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳು ಹಾಗೂ ವಿದ್ಯಾರ್ಥಿಗಳು ಇದ್ದರು.

### ಚಿಕ್ಕಮಗಳೂರಿನಲ್ಲಿ ವಕೀಲ ಪ್ರೀತಂ ಎನ್.ಟಿ ಮೇಲೆ ಹಲ್ಲೆ । ನ್ಯಾಯವಾದಿಗಳ ಸಂಘ ಖಂಡನೆ

# ಹಲ್ಲೆ ಖಂಡಿಸಿ ನ್ಯಾಯವಾದಿಗಳ ಪ್ರತಿಭಟನೆ

**ಉದಯರಶ್ಮಿ ನ್ಯೂಸ್**

ಮುದ್ದೇಬಿಹಾಳ: ಹೆಲ್ಮೆಟ್ ಧರಿಸದ ವಿಷಯವಾಗಿ ಚಿಕ್ಕಮಗಳೂರಿನಲ್ಲಿ ವಕೀಲ ಪ್ರೀತಂ ಎನ್.ಟಿ ಅವರ ಮೇಲೆ ನಡೆದ ಹಲ್ಲೆ ಖಂಡಿಸಿ ಇಲ್ಲಿನ ನ್ಯಾಯವಾದಿಗಳ ಸಂಘದ ಪದಾಧಿಕಾರಿಗಳು ಹಾಗೂ ಸರ್ವ ಸದಸ್ಯರು ಮಂಗಳವಾರ ಕೋರ್ಟ ಕಲಾಪದಿಂದ ಹೊರಗುಳಿದು, ನ್ಯಾಯಾಲಯದಿಂದ ತಹಶೀಲ್ದಾರ ಕಚೇರಿಯವರೆಗೂ ಸಮವಸ್ತ್ರ ಸಹಿತವಾಗಿ ಘಟನೆಗೆ ಸಂಬಂಧಿಸಿದವರ ವಿರುದ್ಧ ಧಿಕ್ಕಾರ ಕೂಗುತ್ತ ಕಾಲ್ನಡಿಗೆಯ ಮೂಲಕ ತಹಶೀಲ್ದಾರ ಕಚೇರಿಯವರೆಗೂ ಸಾಗಿ, ತಹಶೀಲ್ದಾರ ಮುಖಾಂತರ ಮುಖ್ಯಮಂತ್ರಿಗಳಿಗೆ, ಗೃಹ ಸಚೀವರಿಗೆ ಮತ್ತು ಪೊಲೀಸ್ ಮಹಾ ನಿರ್ದೇಶಕರಿಗೆ ಕ್ರತ್ಯದಲ್ಲಿ ಭಾಗಿಯಾದ 6 ಜನ ಪೊಲೀಸರ ಮೇಲೆ ಶಿಸ್ತು ಕ್ರಮ ಜರುಗಿಸಿ ಸೇವೆಯಿಂದ ವಜಾ ಮಾಡಬೇಕು ಎಂದು ಒತ್ತಾಯಿಸಿ ಮನವಿ ಪತ್ರವನ್ನು




ಸಲ್ಲಿಸಿದರು.

ಈ ವೇಳೆ ಸಂಘದ ಅಧ್ಯಕ್ಷ ಎಸ್.ಎಸ್.ಮಾಲಗತ್ತಿ ಮಾತನಾಡಿ, ಸಮಾಧಾನದ ವಿಷಯಕ್ಕೆ ಪೊಲೀಸರು ಕಾನೂನನ್ನು ಕೈಗೆತ್ತಿಕೊಂಡಿದ್ದು ಅಕ್ಷಮ್ಯ ಅಪರಾಧ. ಇಲ್ಲಿ ಹೆಲ್ಮೆಟ್ ಧರಿಸದ ವಕೀಲ ಪ್ರೀತಂ ದಂಡ ಪಾವತಿಸೋಕೆ ಸಿದ್ಧವಾಗಿದ್ದರೂ ದಂಡ ಪಾವತಿಸಿಕೊಳ್ಳದೇ ದರ್ಪ ತೋರಿ, ಇವರು ಮಾಡಿದ್ದೇ ಸರಿ ಎನ್ನುವ ರೀತಿ ಬಿಂಬಿಸಿ ಪೈಪಿನಿಂದ, ಛರ್ಮಪ್ಪಾದಿಂದ ಹೊಡೆದು ಮಾರಣಾಂತಿಕ ಹಲ್ಲೆ ಮಾಡದ್ದಾರೆ. ತಪ್ಪಿತಸ್ಥರ ಮೇಲೆ ನ್ಯಾಯವಾದಿಗಳ ಸಂಘ ದೂರು ಸಲ್ಲಿಸಿದರೂ ಪೊಲೀಸರು ಮಾತ್ರ ತಮ್ಮ ಸಿಬ್ಬಂದಿ ಎಂದು ಉದಾಸೀನತೆ ತೋರಿ ತಪ್ಪಿತಸ್ಥರನ್ನು ಬಂಧಿಸಿಲ್ಲ. ಘಟನೆ ವಿಕೋಪಕ್ಕೆ ತಿರುಗಿದಾಗ ಕೇವಲ ಒಬ್ಬ ಆರೋಪಿಯನ್ನು ಮಾತ್ರ ಬಂಧಿಸಿದ್ದಾರೆ. ಇನ್ನುಳಿದ ಆರೋಪಿತರು ತಮ್ಮ ಮುಂದೆಯೇ ಇದ್ದರೂ ಬಂಧಿಸಲು ಮುಂದಾಗುತ್ತಿಲ್ಲ. ಇದಕ್ಕೆಲ್ಲ ಮೇಲಾಧಿಕಾರಿಗಳ ವೈಫಲ್ಯವೇ ಕಾರಣ. ಇದೆಲ್ಲವನ್ನು ನೋಡಲಾಗಿ ಪೊಲೀಸರೆ ಕಾನೂನು ಕೈಗೆತ್ತಿಕೊಂಡು ವಕೀಲರ ಮೇಲೆ ಹಲ್ಲೆ ನಡೆಸಲು ಮುಂದಾದರೆ ಜನಸಾಮಾನ್ಯರ ಗತಿ ಏನು ಎಂಬ ಪ್ರಶ್ನೆ ಉದ್ಭವಿಸುತ್ತದೆ. ಹಾಗಾಗಿ ವಕೀಲರಿಗೆ ಸೂಕ್ತ ಭದ್ರತೆ ಒದಗಿಸುವ ಕಾನೂನುನ್ನು ಕೂಡಲೇ ಜಾರಿ ಮಾಡುವ ಮೂಲಕ ಈ ಪ್ರಕರಣದಲ್ಲಿ ತಪ್ಪಿತಸ್ಥರ ಮೇಲೆ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ಈ ವೇಳೆ ಎಸ್.ಎಸ್. ಹೂಗಾರ, ಎಸ್.ಎಂ.ಕಿಣಗಿ, ಬಿ.ಎ.ನಾಡಗೌಡರ, ಎನ್.ಆಯ್. ಕೇಸಾಪೂರ, ಶ್ರೀದೇವಿ ರಾಜೂರ, ಎಸ್.ಆರ್.ಅಮರಣ್ಣವರ, ಆರ್.ಎಸ್. ತುಪ್ಪದ, ಎಸ್.ಸಿ.ಹಿರೇಮಠ, ಎನ್. ಆರ್.ಮೊಕಾಶಿ, ಪಿ.ಬಿ.ಗೌಡರ, ಚೇತನ ಶಿವಶಿಂಪಿ, ಶಬ್ಬೀರ ಬಾಗಲಕೋಟ, ಎಸ್.ಎಚ್.ಚಳ್ಳಗಿ, ಎನ್.ಬಿ.ಮುದ್ನಾಳ, ಎಲ್.ಎಸ್.ಮೇಟಿ, ಎಚ್.ಎ.ಮೇಟಿ, ಎಚ್.ವಾಯ್.ಪಾಟೀಲ, ಎಚ್.ಜಿ.ನಾಗೋಡ, ಬಿ.ಎಂ. ಮುಂದಿನಮನಿ, ಎಂ.ಬಿ.ಬಿರಾದಾರ, ಹಸೀನಾ ಅನಂತಪೂರ, ಮಹಾಂತಗೌಡ ಬಿರಾದಾರ, ಪಿ.ಬಿ.ಮಾತೀನ, ಮಹಾಂತಗೌಡ ಪಾಟೀಲ ಸೇರಿದಂತೆ ಮತ್ತಿತರ ನ್ಯಾಯವಾದಿಗಳು ಭಾಗಿಯಾಗಿದ್ದರು.

**ಕಾನೂನುಗಳನ್ನು ಗೌರವಿಸುವುದು ರಕ್ಷಣೆ ಮಾಡುವುದು ಮತ್ತು ಅವುಗಳನ್ನು ಕಾಪಾಡಲಿಕ್ಕೆ ಪೊಲೀಸರಿಗೆ ಅಧಿಕಾರ ಇರುತ್ತೆ. ಆದರೆ ಅದನ್ನು ದುರ್ಬಳಕೆ ಮಾಡಿಕೊಂಡು ಸರಿಯಾಗಿ ಕರ್ತವ್ಯ ನಿರ್ವಹಿಸದೇ ಪೊಲೀಸರ ಹೆಸರಿಗೆ ಕಳಂಕ ತರುವ ಕೃತ್ಯವನ್ನು ಎಸಗಿರುವ 6 ಜನ ಆರೋಪಿಗಳನ್ನು ಸೇವೆಯಿಂದ ವಜಾ ಮಾಡಬೇಕು ಎಂದು ಮನವಿ ಪತ್ರದಲ್ಲಿ ನಮೂದಿಸಲಾಗಿದೆ.**

ರಾಜ್ಯ ಸರ್ಕಾರ ಈ ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿ ಸಿಓಡಿ ತನಿಖೆಗೆ ಒಪ್ಪಿಸಿದ್ದು ಸ್ವಾಗತಾರ್ಹ. ಆದರೆ ಅಲ್ಲಿಯೂ ಪೊಲೀಸರೇ ಇರುವದರಿಂದ ತನಿಖೆ ನಿಷ್ಪಕ್ಷಪಾತವಾಗಿ ಆಗಬೇಕಾದರೆ ಒಬ್ಬ ನಿರ್ವತ್ತ ನ್ಯಾಯವಾದಿಯನ್ನು ನಿರ್ಮಿಸೋದು ಅತ್ಯವಶ್ಯ.

**- ಎಸ್.ಎಸ್.ಮಾಲಗತ್ತಿ ನ್ಯಾಯವಾದಿಗಳ ಸಂಘದ ಅಧ್ಯಕ್ಷರು**

# ಬಸಪ್ಪ ಸಾವಳಗಿ ಮುದ್ದೇಬಿಹಾಳ ತಾಲೂಕು ನೂತನ ಬಿಇಓ

**ಉದಯರಶ್ಮಿ ನ್ಯೂಸ್**

ಮುದ್ದೇಬಿಹಾಳ: ತಾಲೂಕಿನ ನೂತನ ಕ್ಷೇತ್ರ ಶಿಕ್ಷಣಾಧಿಕಾರಿಗಳಾಗಿ ಬಸಪ್ಪ ಶಂಕ್ರಪ್ಪ ಸಾವಳಗಿ ನೇಮಕಗೊಂಡಿದ್ದಾರೆ.

ಹಿಂದಿನ ಬಿಇಓ ಎಸ್.ಜೆ.ನಾಯಕ ಅವರಿಂದ ತೆರವಾದ ಹುದ್ದೆಗೆ ಇವರನ್ನು ಆಯ್ಕೆ ಮಾಡಲಾಗಿದೆ.

ಸಾವಳಗಿ ಅವರು ಈ ಮೊದಲು ಬಾಗಲಕೋಟ ಜಿಲ್ಲೆಯ ಜಮಖಂಡಿ ತಾಲೂಕಿನ ಆಲಬಾಲ ಪೋಸ್ಟ್ ನ ಸರ್ಕಾರಿ



ಪ್ರೌಢ ಶಾಲೆಯಲ್ಲಿ ಮುಖ್ಯ ಶಿಕ್ಷಕರಾಗಿ ಸೇವೆ ಸಲ್ಲಿಸುತ್ತಿದ್ದರು. ಶಿಕ್ಷಣ ಇಲಾಖೆಯ ಅಧೀನ ಕಾರ್ಯದರ್ಶಿ ಮಲ್ಲಿಕಾರ್ಜುನ ರಾಮಚಂದ್ರಪ್ಪ ಈ ಆದೇಶ ಹೊರಡಿಸಿದ್ದು, ತಕ್ಷಣದಿಂದ ಜಾರಿಗೆ ಬರುವಂತೆ ಕರ್ನಾಟಕ ನಾಗರೀಕ ಸೇವಾ ನಿಯಮಗಳು 1958ರ ನಿಯಮ 32 ರ ಅಡಿ ಗ್ರೂಪ್-ಎ ಶ್ರೇಣಿ ಸ್ವತಂತ್ರ ಪ್ರಭಾರದಲ್ಲಿರಿ ಮುಂದಿನ ಆದೇಶದವರೆಗೆ ಹುದ್ದೆ ಮತ್ತು ಸ್ಥಳ ನಿಯುಕ್ತಿಗೊಳಿಸಿದ ಬಗ್ಗೆ ನಮೂದಿಸಲಾಗಿದೆ.

# ರೈತ ಸಂಘದ ಪದಾಧಿಕಾರಿಗಳ ನೇಮಕ

**ಉದಯರಶ್ಮಿ ನ್ಯೂಸ್**

ವಿಜಯಪುರ: ರೈತರ ಹಕ್ಕು ಕರ್ನಾಟಕ ರಾಜ್ಯ ರೈತರ ಸಂಘ ಹಾಗೂ ಹಸಿರು ಸೇನೆಯ ರಾಜ್ಯಾಧ್ಯಕ್ಷರಾದ ಜಿ.ಎನ್.ವೆಂಕಟಲಕ್ಷ್ಮಯ್ಯ (ಜಿ.ಎನ್.ವಿ.ಬಾಬು) ಇವರ ಆದೇಶದ ಮೇರೆಗೆ ಶ್ರೀಮತಿ ದಾನಮ್ಮ ಸೊ. ತೆಗ್ಗಳ್ಳಿ ರವರನ್ನು ರಾಜ್ಯ ಮಹಿಳಾ ಉಪಾಧ್ಯಕ್ಷರನ್ನಾಗಿ, ಸದಾಶಿವಯ್ಯಾ



ನೀಲಕಂಠಯ್ಯ ಅರಕೇರಿಮಠ ರವರನ್ನು ರಾಜ್ಯ ಕಾರ್ಯದರ್ಶಿಯನ್ನಾಗಿ, ಶ್ರೀಮತಿ ರೂಪಾ ಕಾರ್ತಿಕ ಪಾಟೀಲ ಇವರನ್ನು ವಿಜಯಪುರ ಜಿಲ್ಲಾ ಮಹಿಳಾ ಅಧ್ಯಕ್ಷರನ್ನಾಗಿ ಹಾಗೂ ಅರವಿಂದ ಕಾಂತಪ್ಪ ಓಜಿ ರವರನ್ನು ವಿಜಯಪುರ ಜಿಲ್ಲಾಧ್ಯಕ್ಷರನ್ನಾಗಿ ನೇಮಕ ಮಾಡಲಾಗಿದೆ.

ಸಂಘದ ತತ್ವಸಿದ್ಧಾಂತಗಳಿಗೆ ಬದ್ಧರಾಗಿ ಯಾವುದೇ ಬೇರೆ ರಾಜಕೀಯ ಆಸೆ ಆಮಿಷಗಳಿಗೆ ಒಳಗಾಗಿ ಸಾಮಾಜಿಕ ಪಿಡುಗುಗಳಿಂದ ದೂರವಿರಬೇಕು. ಹಾಗೂ ಪ್ರಾಮಾಣಿಕತೆ ಮತ್ತು ಚಾರಿತ್ರ್ಯಕ್ಕೆ ಧಕ್ಕೆ ಬರದ ರೀತಿಯಲ್ಲಿ ಸಾಮಾಜಿಕ ಜವಾಬ್ದಾರಿಯನ್ನು ಸರಿಯಾಗಿ ನಿರ್ವಹಿಸುವಂತೆ ಈ ನೇಮಕಾತಿ ಆದೇಶದಲ್ಲಿ ತಿಳಿಸಲಾಗಿದೆ.

